# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 629 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 11/12/2023 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

************

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಖಾಸಗಿ ಅನುದಾನಿತ ಕೈಗಾರಿಕೆ ತರಬೇತಿ ಸಂಸ್ಥೆಗಳಲ್ಲಿ ನಿವೃತ್ತಿ/ ನಿಧನ / ರಾಜೀನಾಮೆಯಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಯಾವ ವರ್ಷದವರೆಗೆ ಅನುಮತಿ ನೀಡಲಾಗಿದೆ; | ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಯವರಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ನಿರ್ದಿಷ್ಟವಾಗಿ ಯಾವುದೇ ಕಾಲಮಿತಿ ನಿಗದಿಪಡಿಸಿರುವುದಿಲ್ಲ. |
| ಆ) | 2015ರ ನಂತರ ಹಲವಾರು ಅನುದಾನಿತ ಕೈಗಾರಿಕೆ ತರಬೇತಿ ಸಂಸ್ಥೆಗಳಲ್ಲಿ ನಿವೃತ್ತಿ/ನಿಧನ/ರಾಜೀನಾಮೆಯಿಂದ ಸಾಕಷ್ಟು ಹುದ್ದೆಗಳು ಖಾಲಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆಯೇ; (ಮಾಹಿತಿ ನೀಡುವುದು) | ಡಿ.ಜಿ.ಟಿ ಯ ಮಾರ್ಗಸೂಚಿ ಹಾಗೂ ಅನುದಾನ ಸಂಹಿತೆಯ ನಿಯಮಗಳನುಸಾರ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಖಚಿತಪಡಿಸಿಕೊಂಡು ಚಾಲ್ತಿಯಲ್ಲಿರುವ ನಿಯಮಗಳನ್ವಯ ಖಾಲಿ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುತ್ತದೆ. |
| ಇ) | ಅನುದಾನಿತ ಕೈಗಾರಿಕೆ ತರಬೇತಿ ಸಂಸ್ಥೆಗಳಲ್ಲಿ ಪದೋನ್ನತಿ ನೀಡುವಾಗ ಇಲಾಖಾ ಪರೀಕ್ಷೆಗಳನ್ನು ನಡೆಸಬೇಕೆಂಬ ಮಾನದಂಡ ಇರುವುದು ನಿಜವೇ? (ಮಾಹಿತಿ ನೀಡುವುದು) | 1997ರ ಅನುದಾನ ಸಂಹಿತೆಯಲ್ಲಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಪದೋನ್ನತಿ ನೀಡುವಾಗ ಇಲಾಖಾ ಪರೀಕ್ಷೆಗಳನ್ನು ತೇರ್ಗಡೆಯಾಗುವ ಬಗ್ಗೆ ಸ್ಪಷ್ಟ ಮಾರ್ಗಸೂಚಿಗಳಿರುವುದಿಲ್ಲ. |

**ಸಂಖ್ಯೆ: ಕೌಉಜೀಇ 76 ಕೈತಪ್ರ 2023**

(ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.